ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಮಾದಕ ಪದಾರ್ಥಗಳಿಂದ ವಿದ್ಯಾರ್ಥಿಗಳು ಬಲಿಯಾಗುತ್ತಿರುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

376 (428) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಕ್ಕಳು ಮಾದಕ ಪದಾರ್ಥಗಳಿಗೆ ಅದರಲ್ಲೂ ಶಾಲಾ ಮಕ್ಕಳು ಈ ಮಾದಕ ಪದಾರ್ಥಗಳ ಚಟಕ್ಕೆ ಬೀಳುತ್ತಿರುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಾದಕ ಪದಾರ್ಥಗಳ ದುಷ್ಪರಿಣಾಮಗಳ ಬಗ್ಗೆ ಶಾಲಾ ಮಟ್ಟದಲ್ಲಿ ಅರಿವು ಮೂಡಿಸಲು ಸರ್ಕಾರ ಏನಾದರೂ ಕ್ರಮ ಕೈಗೊಂಡಿದೆಯೇ ;

(ಇ) ಮಾದಕ ಪದಾರ್ಥಗಳಿಗೆ ಬಲಿಯಾದ ಮಕ್ಕಳ ಪುರ್ನವಸತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಶಾಲೆಗಳ ಬಳಿ ಮತ್ತು ಶಾಲೆಗಳಲ್ಲಿ ಮಾದಕ ವಸ್ತುಗಳನ್ನು ಮಾರುವವರು, ವಿತರಿಸುವವರನ್ನು ಬಂಧಿಸಿ ಕ್ರಮ ಕೈಗೊಳ್ಳಲು ಶಿಕ್ಷಣ ಇಲಾಖೆ ಮತ್ತು ಪೊಲೀಸ್ ಇಲಾಖೆ ಜಂಟಿಯಾಗಿ ಏನಾದರೂ ಕ್ರಮ ಕೈಗೊಂಡಿದೆಯೇ ;

(ಉ) ಮಾದಕ ಪದಾರ್ಥಗಳನ್ನು ಮಾರುವ ವ್ಯಕ್ತಿಗಳನ್ನು ಕಂಡು ಹಿಡಿಯಲು/ಶಿಕ್ಷಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?